ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ
ದಿನಾಂಕ : DATE : 20-12-20

# ಹೊಸವರ್ಷಕ್ಕೆ ಶಾಲೆ ಶುರು

## ಜ.1 ರಿಂದ 10ನೇ ತರಗತಿ, ದ್ವಿತೀಯ ಪಿಯುಸಿ ಆರಂಭ । 6 ರಿಂದ 9ನೇ ತರಗತಿಗೆ ವಿದ್ಯಾಗಮ ತರಗತಿ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಲಾಕ್‌ಡೌನ್ ಹಿನ್ನಲೆಯಲ್ಲಿ ಮಾರ್ಚ್‌ನಿಂದ ಮುಚ್ಚಿದ್ದ ಶಾಲಾ-ಕಾಲೇಜುಗಳನ್ನು ಜನವರಿ 1ರಿಂದ ಆರಂಭಿಸಲು ರಾಜ್ಯ ಸರಕಾರ ಹಸಿರು ನಿಶಾನೆ ತೋರಿದೆ.

ಈ ಕುರಿತು ಶನಿವಾರ ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ತಾಂತ್ರಿಕ ಸಲಹಾ ಸಮಿತಿ ಸಭೆಯ ನಂತರ ಮಾತನಾಡಿದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, '2021ರ ಜನವರಿ 1 ರಿಂದ 10ನೇ ತರಗತಿ ಮತ್ತು ದ್ವಿತೀಯ ಪಿಯುಸಿ ತರಗತಿ ಹಾಗೂ 6 ರಿಂದ 9ನೇ ತರಗತಿಗೆ ವಿದ್ಯಾಗಮ ಪ್ರಾರಂಭವಾಗಲಿದೆ. ಹದಿನೈದು ದಿನಗಳ ಕಾಲ ಪರಿಸ್ಥಿತಿ ಅವಲೋಕಿಸಿ ಇತರ ತರಗತಿ ಪ್ರಾರಂಭಿಸುವ ಕುರಿತು ನಿರ್ಧಾರ ತೆಗೆದುಕೊಳ್ಳಲಾಗುತ್ತದೆ' ಎಂದರು.

ಶಿಕ್ಷಣ ಸಚಿವ ಸುರೇಶ್‌ಕುಮಾರ್ ಮಾತನಾಡಿ, 'ಪ್ರಥಮ ಪಿಯುಸಿ ತರಗತಿ ಆರಂಭಿಸುವ ಬಗ್ಗೆ 15 ದಿನಗಳ ಬಳಿಕ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಒಂದು ತರಗತಿಯಲ್ಲಿ 15 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ವಿರುತ್ತದೆ' ಎಂದು ಹೇಳಿದರು.



ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣಾದಲ್ಲಿ ಶನಿವಾರ ನಡೆದ ತಾಂತ್ರಿಕ ಸಲಹಾ ಸಮಿತಿ ಸಭೆ.

**ಮಕ್ಕಳಿಗೆ ಕರೋನಾ ಪರೀಕ್ಷೆ ಕಡ್ಡಾಯವಲ್ಲ. ರೋಗಲಕ್ಷಣಗಳು ಕಂಡು ಬಂದಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು. ಪ್ರತಿ ಶಾಲೆಯಲ್ಲೂ ಐಸೋಲೇಟೆಡ್ ಕೊಠಡಿ ಇರಲಿದೆ. ಮಕ್ಕಳು ಯಾವುದೇ ಭಯವಿಲ್ಲದೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವ ಮೂಲಕ ಶಾಲೆಗಳಿಗೆ ಹೋಗಬೇಕು.**

**- ಬಿ.ಎಸ್.ಯಡಿಯೂರಪ್ಪ** ಮುಖ್ಯಮಂತ್ರಿ

**ಪರೀಕ್ಷೆ ಯಾವಾಗ ನಡೆಸಬೇಕು ಎಂಬುದರ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ. ಪಠ್ಯವನ್ನು ಕಡಿತ ಮಾಡಲಾಗುವುದು, ಪರಿಸ್ಥಿತಿ ನೋಡಿಕೊಂಡು ಉಳಿದ ತರಗತಿಗಳನ್ನು ಆರಂಭಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು.**

**-ಸುರೇಶ್‌ಕುಮಾರ್** ಶಿಕ್ಷಣ ಸಚಿವ

'ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಬೋರ್ಡ್ ಪರೀಕ್ಷೆಯಾಗಿರುವುದರಿಂದ ಶನಿವಾರ ಸಭೆ ನಡೆಸಿ, ಸರ್ವಾನುಮತದಿಂದ ನಿರ್ಧಾರ ತೆಗೆದುಕೊಳ್ಳಲಾಯಿತು.

### ಪ್ರಮುಖ ಮಾರ್ಗಸೂಚಿಗಳು

- ಬಿಸಿಯೂಟ ಇರುವುದಿಲ್ಲ, ಮನೆಗೇ ಪಡಿತರ ಪೂರೈಕೆ
- ಮಧ್ಯಾಹ್ನ ತರಗತಿ ಮುಕ್ತಾಯ, ಶಾಲೆಗೆ ದಾಖಲು ಕಡ್ಡಾಯ
- ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ತರಗತಿ
- ವಿದ್ಯಾಗಮಕ್ಕೆ ಪೋಷಕರ ಅನುಮತಿ ಪತ್ರ ಕಡ್ಡಾಯ
- ಶೀತ, ಜ್ವರ ಇಲ್ಲದರ ದೃಢೀಕರಣ ಪತ್ರ ಕಡ್ಡಾಯ
- ಎಸ್‌ಸಿ, ಎಸ್‌ಟಿ, ಒಬಿಸಿ ಹಾಸ್ಟೆಲ್ ತೆರೆಯಲು ಅನುಮತಿ
- ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಕೋವಿಡ್ ಪರೀಕ್ಷೆ ಕಡ್ಡಾಯ
- ನೆಗೆಟಿವ್ ವರದಿ ಇದ್ದರೆ ಮಾತ್ರ ಹಾಸ್ಟೆಲ್‌ಗೆ ಪ್ರವೇಶ
- ಶಾಲಾ ಆವರಣಗಳಲ್ಲಿ ವಾರಕ್ಕೆ ಮೂರು ದಿನ ವಿದ್ಯಾಗಮ ತರಗತಿ
- ಒಂದು ತರಗತಿಯಲ್ಲಿ ಹದಿನೈದು ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ

ತರಗತಿಗೆ ಬರಲೇಬೇಕು ಎಂಬ ಒತ್ತಡವಿಲ್ಲ, ಆನ್‌ಲೈನ್ ಮೂಲಕವೇ ಕಲಿಯುತ್ತೇವೆ ಎಂದು ಬಯಸುವವರಿಗೆ ಅದಕ್ಕೂ ಅವಕಾಶ ನೀಡಲಾಗುವುದು' ಎಂದು ತಿಳಿಸಿದ್ದಾರೆ.

ಸಭೆಯಲ್ಲಿ ಸಚಿವ ಡಾ.ಕೆ.ಸುಧಾಕರ್, ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್, ಶಿಕ್ಷಣ ಇಲಾಖೆ ಪ್ರಧಾ[ನ] ಕಾರ್ಯದರ್ಶಿ ಎಸ್.ಉಮಾಶಂಕರ್ ಮ[ತ್ತು] ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗ[ಳು] ಉಪಸ್ಥಿತರಿದ್ದರು.